# ಕರ್ನಾಟಕ ಸರ್ಕಾರ

**ಸಂಖ್ಯೆ:ಸಿಆಸುಇ 86 ಆರ್‌ಟಿಐ 2017**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 28.04.2017**

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ 6(3)ರಡಿ ಮಾಹಿತಿ ಹಕ್ಕು ಮನವಿಗಳನ್ನು ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ: 1. ಸುತ್ತೋಲೆ ಸಂ: ಸಿಆಸುಇ 107 ಆರ್‌ಟಿಐ 2012,ದಿ: 22.09.2012
2. ಕೇಂದ್ರ ಸರ್ಕಾರದ ಕಚೇರಿ ಜ್ಞಾಪನ ಸಂಖ್ಯೆ:10/2/2008–ಐಆರ್, ದಿನಾಂಕ:12 ಜೂನ್ 2008

– – –

ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮಾಹಿತಿ ಹಕ್ಕು ಅಧಿನಿಯಮ 2005 ರಡಿ ಸ್ವೀಕರಿಸುವ ಅರ್ಜಿಗಳನ್ನು ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 6(3)ರಡಿ ಹಲವು ಸಾರ್ವಜನಿಕ ವರ್ಗಾವಣೆ ಮಾಡಿರುವುದು ಕಂಡುಬಂದಿರುತ್ತದೆ.

ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 6(3)ರಡಿ "ಒಬ್ಬ ಅರ್ಜಿದಾರನು,–(i) ಮತ್ತೊಂದು ಸಾರ್ವಜನಿಕ ಪ್ರಾಧಿಕಾರ ಹೊಂದಿರುವಂಥ ಮಾಹಿತಿಗಾಗಿ; ಅಥವಾ (ii) ವಸ್ತು ವಿಷಯವು ಮತ್ತೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಗೆ ನಿಕಟವಾಗಿ ಸಂಬಂಧಿಸಿರುವ ಮಾಹಿತಿಗಾಗಿ, ಸಾರ್ವಜನಿಕ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿದ್ದರೆ, ಯಾವ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆಯೋ ಆ ಸಾರ್ವಜನಿಕ ಪ್ರಾಧಿಕಾರವು ಅರ್ಜಿಯನ್ನು ಅಥವಾ ಸಮುಚಿತವೆನಿಸಬಹುದಾದ ಅದರ ಭಾಗವನ್ನು ಆ ಮತ್ತೊಂದು ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಮತ್ತು ಅಂಥ ವರ್ಗಾವಣೆಯನ್ನು ಕೂಡಲೇ ಅರ್ಜಿದಾರನಿಗೆ ತಿಳಿಸತಕ್ಕದ್ದು" ಎಂದಿರುತ್ತದೆ.

ಒಬ್ಬ ವ್ಯಕ್ತಿಯು ಮಾಹಿತಿಗಾಗಿ ಒಂದು ಸಾರ್ವಜನಿಕ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸಿದ್ದು, ಅದರ ಒಂದು ಭಾಗವು ಆ ಸಾರ್ವಜನಿಕ ಪ್ರಾಧಿಕಾರದಲ್ಲಿ ಲಭ್ಯವಿರುತ್ತದೆ ಮತ್ತು ಮಾಹಿತಿಯನ್ನು ಉಳಿದ ಭಾಗವು ಒಂದಕ್ಕಿಂತ ಹೆಚ್ಚು ಇತರ ಸಾರ್ವಜನಿಕ ಪ್ರಾಧಿಕಾರಗಳಲ್ಲಿ ಚಲ್ಲಾಪಿಲ್ಲಿಯಾಗಿ ಹಂಚಿ ಹೋಗಿರುತ್ತದೆ. ಅಂತಹ ಸಂದರ್ಭದಲ್ಲಿ ಅರ್ಜಿಯನ್ನು ಸ್ವೀಕರಿಸುವ ಸಾರ್ವಜನಿಕ ಪ್ರಾಧಿಕಾರದ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅದಕ್ಕೆ ಸಂಬಂಧಿಸಿದ ಮಾಹಿತಿಯನ್ನು ನೀಡಬೇಕು ಮತ್ತು ಸಂಬಂಧಪಟ್ಟ ಸಾರ್ವಜನಿಕ ಪ್ರಾಧಿಕಾರಗಳಿಂದ ಮಾಹಿತಿಯನ್ನು ಪಡೆಯುವುದಕ್ಕಾಗಿ ಆ ಪ್ರಾಧಿಕಾರಗಳಿಗೆ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸುವಂತೆ ಅರ್ಜಿದಾರನಿಗೆ ಸಲಹೆ ಮಾಡಬೇಕು.

ಆದ್ದರಿಂದ ಸೆಕ್ಷನ್ 6(3)ರಡಿ ಒಬ್ಬ ಅರ್ಜಿದಾರನು ಮತ್ತೊಂದು ಸಾರ್ವಜನಿಕ ಪ್ರಾಧಿಕಾರ ಹೊಂದಿರುವಂತಹ ಮಾಹಿತಿಗಾಗಿ ಅರ್ಜಿ ಸಲ್ಲಿಸಿದ್ದರೆ, ಯಾವ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆಯೋ, ಆ ಸಾರ್ವಜನಿಕ ಪ್ರಾಧಿಕಾರ ಅರ್ಜಿಯನ್ನು ಮತ್ತೊಂದು ಪ್ರಾಧಿಕಾರಕ್ಕೆ 5 ದಿನಗಳೊಳಗಾಗಿ ವರ್ಗಾಯಿಸತಕ್ಕದ್ದು ಮತ್ತು ವರ್ಗಾವಣೆಯ ಮಾಹಿತಿಯನ್ನು ಅರ್ಜಿದಾರರಿಗೆ 5 ದಿನಗಳೊಳಗಾಗಿ ಕೊಡತಕ್ಕದ್ದು.

ಪು.ತಿ.ನೋ.

ಮೇಲಿನ ಸೂಚನೆಗಳನ್ನು ಪಾಲಿಸುವಂತೆ ತಮ್ಮ ಆಡಳಿತಾಧೀನದ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಿದೆ.

(ಪರಮೇಶ್ ಪಾಂಡೆ),
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಜನಸ್ಪಂದನ)

**ಇವರಿಗೆ,**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
5. ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು

ಪ್ರತಿ:– ಮಾಹಿತಿಗಾಗಿ

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನಸೌಧ
3. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹು ಮಹಡಿ ಕಟ್ಟಡ.